**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ರಾಜ್ಯದ ಸ್ನಾತಕ/ಸ್ನಾತಕೋತ್ತರ ವೈದ್ಯಕೀಯ & ದಂತ ವೈದ್ಯಕೀಯ ಕೋರ್ಸುಗಳಿಗೆ ಪ್ರವೇಶಾತಿ ಬಯಸುವ ಅಭ್ಯರ್ಥಿಗಳಿಗೆ ಭಾಷಾ ಅಲ್ಪಸಂಖ್ಯಾತರ ಪ್ರಮಾಣ ಪತ್ರಗಳನ್ನು ನೀಡುವ ಕುರಿತು.

**ಓದಲಾಗಿದೆ:** 1) ಆಡಳಿತಾಧಿಕಾರಿ, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ಇವರ ದಿ:04.06.2018 ಪತ್ರ ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿಆರ್-18/2018.

2) ವೈದ್ಯಕೀಯ ಶಿಕ್ಷಣ ಇಲಾಖೆಯ ಕಡತ ಸಂಖ್ಯೆ: ಆಕುಕ 78 ಆರ್‌ಜಿಯು 2018 (ಭಾಗ).

********

**ಪ್ರಸ್ತಾವನೆ:**

ರಾಜ್ಯದ ವೈದ್ಯಕೀಯ & ದಂತವೈದ್ಯಕೀಯ ಕೋರ್ಸುಗಳ ಪ್ರವೇಶಾತಿಗಾಗಿ ಸೀಟು ಹಂಚಿಕೆಯ ಸಂದರ್ಭದಲ್ಲಿ ನೀಟ್ ಪರೀಕ್ಷೆಯಲ್ಲಿ ಅರ್ಹತೆ ಪಡೆದ ವಿದ್ಯಾರ್ಥಿಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸೀಟು ಹಂಚಿಕೆ ಮಾಡಲಾಗುತ್ತಿದೆ. 2017ರ ಮೊದಲು ಪ್ರಾಧಿಕಾರವು ಕೇವಲ ಸರ್ಕಾರಿ ಮತ್ತು ಸರ್ಕಾರಿ ಕೋಟಾದ ಸೀಟು ಹಂಚಿಕೆಯನ್ನು ಮಾಡುತ್ತಿತ್ತು. ಆಗ ಭಾಷಾ ಅಲ್ಪಸಂಖ್ಯಾತ ಮೀಸಲಾತಿ ಸೀಟುಗಳು ಪ್ರಾಧಿಕಾರಕ್ಕೆ ಲಭ್ಯವಿರುತ್ತಿರಲಿಲ್ಲ. ಆದರೆ 2017 ರಿಂದ ಕೇಂದ್ರಿಕೃತ ಕೌನ್ಸೆಲಿಂಗ್ ನಡೆಸುವುದರಿಂದ ಭಾಷಾ ಅಲ್ಪಸಂಖ್ಯಾತ ಕಾಲೇಜುಗಳು ಸೇರಿದಂತೆ ಎಲ್ಲಾ ಕಾಲೇಜುಗಳ ಎಲ್ಲಾ ಸೀಟುಗಳನ್ನು ಏಕರೂಪದ ಕೌನ್ಸಿಲಿಂಗ್ ಮೂಲಕ ಹಂಚಿಕೆ ಮಾಡಲಾಗುತ್ತಿದೆ. ಭಾಷಾ ಅಲ್ಪಸಂಖ್ಯಾತ ಮೀಸಲಾತಿ ಸೀಟುಗಳನ್ನು ಹಂಚಿಕೆ ಮಾಡುವಾಗ ಅನುಸರಿಬೇಕಾದ ನಿಯಮಗಳು ಮತ್ತು ವಿದ್ಯಾರ್ಥಿಗಳು ನೀಡಬೇಕಾಗಿರುವ ಪ್ರಮಾಣಪತ್ರಗಳ ಬಗ್ಗೆ ತೀರ್ಮಾನ ಕೈಗೊಳ್ಳುವಂತೆ ಕೋರಿದ್ದಾರೆ.

ಈ ವಿಷಯವನ್ನು ದಿನಾಂಕ: 02.06.2018 ರಂದು ಅಪರ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಚರ್ಚಿಸಲಾಗಿದ್ದು, ಭಾಷಾ ಅಲ್ಪಸಂಖ್ಯಾತ ಮೀಸಲಾತಿ ಕೋರುವ ವಿದ್ಯಾರ್ಥಿಗಳಿಗಾಗಿ ನಿಯಮ ರೂಪಿಸುವ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸಲು ಸೂಚಿಸಿರುವುದರಿಂದ ಆಡಳಿತಾಧಿಕಾರಿ, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ಇವರು ದಿ: 04-06-2018 ರಂದು ಈ ಕೆಳಗಿನಂತೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

1) ಭಾಷಾ ಅಲ್ಪಸಂಖ್ಯಾತ ಮೀಸಲಾತಿಯು ತಮಿಳು, ತೆಲುಗು, ಕೊಡವ & ತುಳು ಮಾತೃ ಭಾಷೆಯ ಕರ್ನಾಟಕದ ಅಭ್ಯರ್ಥಿಗಳಿಗೆ ಮಾತ್ರ ಅನ್ವಯವಾಗುತ್ತದೆ.

2) ಅವನು/ಅವಳು 1ನೇ ತರಗತಿಯಿಂದ 12ನೇ ತರಗತಿಯವರೆಗೆ ಕನಿಷ್ಠ 10 ವರ್ಷಗಳ ವ್ಯಾಸಂಗವನ್ನು ಕರ್ನಾಟಕದಲ್ಲಿ ಪೂರೈಸಿರಬೇಕು.

ಅದರನ್ವಯ ವೈದ್ಯಕೀಯ ಶಿಕ್ಷಣ ಇಲಾಖೆಯು ಮೇಲೆ ಓದಲಾದ (2) ರ ಕಡತದಲ್ಲಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಆದ್ದರಿಂದ ಈ ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ, ರಾಜ್ಯದ ಸ್ನಾತಕ/ಸ್ನಾತಕೋತ್ತರ ವೈದ್ಯಕೀಯ & ದಂತ ವೈದ್ಯಕೀಯ ಕೋರ್ಸುಗಳ ಪ್ರವೇಶಾತಿ ಬಯಸುವ ಅಭ್ಯರ್ಥಿಗಳಿಗೆ ಭಾಷಾ ಅಲ್ಪಸಂಖ್ಯಾತ ಮೀಸಲಾತಿ ನೀಡುವ ಕುರಿತಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಪ್ರಸ್ತಾಪಿಸಿರುವ ಷರತ್ತುಗಳನ್ನು 2018-19 ನೇ ಸಾಲಿನಿಂದ ಅನುಸರಿಸಲು ಹಾಗೂ ಸಂಬಂಧಪಟ್ಟ ಸಂಸ್ಥೆಯ ಮುಖ್ಯಸ್ಥರು ನೀಡಿದ ದೃಢೀಕೃತ ಮಾಹಿತಿಯನ್ನು ಪರಿಗಣಿಸಿ, ಭಾಷಾ ಅಲ್ಪಸಂಖ್ಯಾತ

ಪ್ರಮಾಣ ಪತ್ರಗಳನ್ನು ನೀಡಲು 1 ರಿಂದ 10ನೇ ತರಗತಿವರೆಗಿನ ವಿದ್ಯಾರ್ಥಿಯ ವ್ಯಾಸಂಗಕ್ಕೆ ಸಂಬಂಧಿಸಿದಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ಹಾಗೂ 11 ರಿಂದ 12ನೇ ತರಗತಿ/ತತ್ಸಮಾನ ವ್ಯಾಸಂಗಕ್ಕೆ ಸಂಬಂಧಿಸಿದಂತೆ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ರವರನ್ನು ಸಕ್ಷಮ ಪ್ರಾಧಿಕಾರವನ್ನಾಗಿ ನೇಮಿಸಲು ಸರ್ಕಾರವು ತೀರ್ಮಾನಿಸಿ, ಈ ಕೆಳಗಿನಂತೆ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ:165 ಮಾಹಿತಿ 2018, ದಿನಾಂಕ:12.09.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2018-19 ನೇ ಸಾಲಿನಿಂದ ರಾಜ್ಯದ ಸ್ನಾತಕ/ಸ್ನಾತಕೋತ್ತರ ವೈದ್ಯಕೀಯ & ದಂತ ವೈದ್ಯಕೀಯ ಕೋರ್ಸುಗಳ ಪ್ರವೇಶಾತಿ ಬಯಸುವ ಅಭ್ಯರ್ಥಿಗಳಿಗೆ ಭಾಷಾ ಅಲ್ಪಸಂಖ್ಯಾತ ಮೀಸಲಾತಿ ನೀಡುವ ಕುರಿತಂತೆ ಸಂಬಂಧಪಟ್ಟ ಸಂಸ್ಥೆಯ ಮುಖ್ಯಸ್ಥರು ನೀಡಿದ ದೃಢೀಕೃತ ಮಾಹಿತಿಯನ್ನು ಪರಿಗಣಿಸಿ, 1 ರಿಂದ 10ನೇ ತರಗತಿವರೆಗಿನ ವಿದ್ಯಾರ್ಥಿಯ ವ್ಯಾಸಂಗಕ್ಕೆ ಸಂಬಂಧಿಸಿದಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ಹಾಗೂ 11 ರಿಂದ 12ನೇ ತರಗತಿ/ತತ್ಸಮಾನ ವ್ಯಾಸಂಗಕ್ಕೆ ಸಂಬಂಧಿಸಿದಂತೆ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ರವರನ್ನು ಭಾಷಾ ಅಲ್ಪಸಂಖ್ಯಾತ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮ ಪ್ರಾಧಿಕಾರವನ್ನಾಗಿ ನೇಮಿಸಿದೆ. ಸದರಿಯವರು ಕ್ರಮವಾಗಿ ಇದರೊಂದಿಗೆ ಲಗತ್ತಿಸಿರುವ ನಮೂನೆ 5 & 5ಎ ರಂತೆ ಪ್ರಮಾಣಪತ್ರಗಳನ್ನು ನೀಡತಕ್ಕದ್ದು.

ಮುಂದುವರೆದು, ರಾಜ್ಯದ ಸ್ನಾತಕ ವೈದ್ಯಕೀಯ & ದಂತ ವೈದ್ಯಕೀಯ ಸೀಟು ಹಂಚಿಕೆಯಲ್ಲಿ ಭಾಷಾ ಅಲ್ಪಸಂಖ್ಯಾತ ಮೀಸಲಾತಿ ನೀಡುವ ಸಂಬಂಧ ಈ ಕೆಳಕಂಡ ಷರತ್ತುಗಳನ್ನು 2018-19 ನೇ ಸಾಲಿನಿಂದ ಅನುಸರಿಸಲು ಆದೇಶಿಸಿದೆ.

1) ಭಾಷಾ ಅಲ್ಪಸಂಖ್ಯಾತ ಮೀಸಲಾತಿಯು ತಮಿಳು, ತೆಲುಗು, ಕೊಡವ & ತುಳು ಮಾತೃ ಭಾಷೆಯ ಕರ್ನಾಟಕದ ಅಭ್ಯರ್ಥಿಗಳಿಗೆ ಮಾತ್ರ ಅನ್ವಯವಾಗುತ್ತದೆ.
2) ಅವನು/ಅವಳು 1ನೇ ತರಗತಿಯಿಂದ 12ನೇ ತರಗತಿಯವರೆಗೆ ಕನಿಷ್ಠ 10 ವರ್ಷಗಳ ವ್ಯಾಸಂಗವನ್ನು ಕರ್ನಾಟಕದಲ್ಲಿ ಪೂರೈಸಿರಬೇಕು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

12/9/18

(ಎಸ್.ಆರ್.ಎಸ್.ನಾಥನ್)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ(ಯೋಜನೆ)

12/9

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು –ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ 25 ಪ್ರತಿಗಳನ್ನು ಒದಗಿಸುವಂತೆ ಕೋರಿದೆ.

**ಪ್ರತಿ ಮಾಹಿತಿಗಾಗಿ:**

1) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು

4) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01,

5) ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರ, , 18 ನೇ ಕ್ರಾಸ್, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು–560032.

6) ಕಾರ್ಯಕಾರಿ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18 ನೇ ಕ್ರಾಸ್, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು–560032.

7) ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು–560009.

8) ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಟಿ ಬ್ಲಾಕ್, ಜಯನಗರ, ಬೆಂಗಳೂರು–560041.

9) ರಾಜ್ಯದ ಎಲ್ಲಾ ಉಪನಿರ್ದೇಶಕರು /ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ – ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ರವರ ಮುಖಾಂತರ.

10) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

11) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.

12) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

13) ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.